**All India Radio: Bangalore**
**Regional Bulletin In Kannada**
**16.09.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಎಂಟನೇ ಅಂತಾರಾಷ್ಟ್ರೀಯ ತೆರಿಗೆ ಸಮ್ಮೇಳನಕ್ಕೆ ಬೆಂಗಳೂರಿನಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
2. ಯುಪಿಐ ವಹಿವಾಟಿಗೆ ತೆರಿಗೆ ವಿಚಾರ : ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಕಾಂಗ್ರೆಸ್ ಖಂಡನೆ
3. ಮಿಮ್ಸ್ ಜಾಗ ಅತಿಕ್ರಮಣ ಕುರಿತಂತೆ ಕೂಡಲೇ ಸಮಸ್ಯೆ ಇತ್ಯರ್ಥಕ್ಕೆ ಸಚಿವ ಚಲುವರಾಯಸ್ವಾಮಿ ಜಿಲ್ಲಾಡಳಿತಕ್ಕೆ ಸೂಚನೆ
4. ಚಾಮರಾಜನಗರದಲ್ಲಿ ಮುಂದುವರಿದ ಹುಲಿ ಸೆರೆ ಕಾರ್ಯಾಚರಣೆ : ಜಮೀನುಗಳಿಗೆ ತೆರಳದಂತೆ ಅರಣ್ಯಾಧಿಕಾರಿಗಳು ರೈತರಿಗೆ ಸೂಚನೆ
5. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆ – ಹವಾಮಾನ ಇಲಾಖೆ ಮುನ್ಸೂಚನೆ

<><><><>

ತೆರಿಗೆಗೆ ಸಂಬಂಧಿಸಿದ ಪ್ರಸ್ತಾವನೆಗಳು ಕೇವಲ ದರ ಕಡಿತ ವಿನಾಯಿತಿ ಅಥವಾ ರಿಯಾಯಿತಿಗಳನ್ನು ಕೋರುವುದಕ್ಕೆ ಸೀಮಿತವಾಗದೇ ರಾಷ್ಟ್ರದ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡಬೇಕು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ತೆರಿಗೆ ಸಂಶೋಧನೆ ಮತ್ತು ವಿಶ್ಲೇಷಣಾ ಪ್ರತಿಷ್ಠಾನ ಆಯೋಜಿಸಿದ್ದ ನವಯುಗದ ತೆರಿಗೆ ಪದ್ಧತಿ ಕುರಿತ ಎರಡು ದಿನಗಳ ಸಮ್ಮೇಳನವನ್ನು ಅವರು ಉದ್ಘಾಟಿಸಿದರು. ಸ್ವತಂತ್ರ ತೆರಿಗೆ ನೀತಿ ಸಂಶೋಧನೆಯನ್ನು ಸಾರ್ವಜನಿಕ ಚರ್ಚೆಯ ನಿಯಮಿತ ಭಾಗವನ್ನಾಗಿ ಮಾಡುವಂತೆ ಅವರು ಶಿಕ್ಷಣತಜ್ಞರು, ಸಂಶೋಧಕರು ಮತ್ತು ಚಿಂತಕರಿಗೆ ಕರೆ ನೀಡಿದ್ದಾರೆ. ತೆರಿಗೆ ಸಂಶೋಧನೆಯು ಸರ್ಕಾರದ ಬೊಕ್ಕಸಕ್ಕೆ ಉಂಟಾಗುವ ಪ್ರತಿ ಆದಾಯದ ನಷ್ಟಕ್ಕೂ ಕಾರ್ಯ ಸಾಧ್ಯವಾದ ಪರ್ಯಾಯಗಳನ್ನು ಸೂಚಿಸುವಂತಿರಬೇಕು ಎಂದು ಪ್ರತಿಪಾದಿಸಿದ್ದಾರೆ.

<><><><>

ಯುಪಿಐ ವಹಿವಾಟಿಗೆ ತೆರಿಗೆ ವಿಧಿಸಿರುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಕಾಂಗ್ರೆಸ್ ಮುಖಂಡ ರಣದೀಪ್ ಸಿಂಗ್ ಸುರ್ಜೇವಾಲ ಖಂಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದರಿಂದ ಜನರಿಗೆ ಹೊರೆಯಾಗಲಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಮಹಿಳಾ ಶಾಸಕರಿಗೆ ಸ್ಥಾನ ನೀಡದ ಕುರಿತಂತೆ ಪ್ರತಿಕ್ರಿಯಿಸಿದ ಅವರು ತಮ್ಮದೇ ತಪ್ಪಿಂದ ಸಂಪುಟದಲ್ಲಿ ಮಹಿಳಾ ಸಚಿವರಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪರಿಶಿಷ್ಟ ಸಮುದಾಯದ ನಾಯಕ ಎಂಬ ಕಾರಣಕ್ಕೆ ಸತೀಶ್ ಜಾರಕಿಹೊಳಿಯವರನ್ನು ೨ ಬಾರಿ ಗುರಿಯಾಗಿಸಿ ಇಡಿ ದಾಳಿ ನಡೆಸಿದೆ ಎಂದು ಆರೋಪಿಸಿದ್ದಾರೆ. ಯಾವುದೇ ಕಾರಣಕ್ಕೂ ಕೇಂದ್ರ ಸರ್ಕಾರದ ಮುಂದೆ ತಲೆ ಬಾಗುವುದಿಲ್ಲ ಎಂದು ತಿಳಿಸಿದ್ದಾರೆ.

<><><><>

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಜಾಗ ಅತಿಕ್ರಮಣ ಕೊಳಚೆ ನಿರ್ಮೂಲನಾ ಮಂಡಳಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮ ಹಾಗೂ ಅನಧಿಕೃತ ವಿದ್ಯುತ್ ಸಂಪರ್ಕ ಜಾಲದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದ ಹೋರಾಟಗಾರರ ಮನವಿಗೆ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಸ್ಪಂದಿಸಿದ್ದಾರೆ. ಕೂಡಲೇ ಸಮಸ್ಯೆ ಇತ್ಯರ್ಥಕ್ಕೆ ಜಿಲ್ಲಾಧಿಕಾರಿಗೆ ಗಡುವು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ವಿವಿಧ ಸಂಘಟನೆಗಳು ನಡೆಸುತ್ತಿದ್ದ ಅಮರಣಾಂತ ಉಪವಾಸ ಸತ್ಯಾಗ್ರಹವನ್ನು ಸಚಿವ ಚಲುವರಾಯಸ್ವಾಮಿ ಅವರ ಭರವಸೆಯ ಮೇರೆಗೆ ಹಿಂಪಡೆದಿದ್ದಾರೆ. ಜಿಲ್ಲಾಧಿಕಾರಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳ ಜೊತೆ ಬೆಂಗಳೂರಿನಲ್ಲಿ ಶೀಘ್ರವೇ ಉನ್ನತ ಮಟ್ಟದ ಸಭೆ ನಡೆಸಿ, ನವೆಂಬರ್ ಅಥವಾ ಡಿಸೆಂಬರ್ ಅಂತ್ಯದೊಳಗೆ ಕಾನೂನು ಚೌಕಟ್ಟಿನಲ್ಲಿ ಸಮಸ್ಯೆಗೆ ತಾರ್ಕಿಕ ಅಂತ್ಯ ಹಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

<><><><>

ಚಾಮರಾಜನಗರ ತಾಲೂಕಿನ ಬಡಗಲಪುರ ಗ್ರಾಮದ ಜಮೀನಿನಲ್ಲಿ ಹುಲಿ ದಾಳಿಗೆ ರೈತ ಬಸವಣ್ಣ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಸಿಬ್ಬಂದಿ ಹುಲಿ ಸೆರೆ ಕಾರ್ಯಾಚರಣೆ ಮುಂದುವರೆಸಿದ್ದಾರೆ. ನಿನ್ನೆಯಿಂದಲೂ ಜಮೀನಿನಲ್ಲೇ ಬೀಡುಬಿಟ್ಟಿರುವ ಅರಣ್ಯ ಸಿಬ್ಬಂದಿ ಹುಲಿ ಹೆಜ್ಜೆ ಗುರುತಿನ ಮೂಲಕ ಹುಲಿ ಇರುವಿಕೆ ಸ್ಥಳ ಪತ್ತೆಹಚ್ಚುತ್ತಿದ್ದಾರೆ. ಡ್ರೋಣ್ ಹಾಗೂ ಥರ್ಮಲ್ ಡ್ರೋಣ್, ಶ್ವಾನದಳದ ಮೂಲಕ ಕಾರ್ಯಾಚರಣೆ ನಡೆಸುತ್ತಿದ್ದು ಇದುವರೆಗೂ ಹುಲಿ ಸುಳಿವು ಸಿಕ್ಕಿಲ್ಲ. ಕಬ್ಬಿನ ಗದ್ದೆಯೊಳಗೆ ಆಯಕಟ್ಟಿನ ಸ್ಥಳದಲ್ಲಿ ಕೊಟ್ಟಿಗೆ ಮಾದರಿ ಬೋನ್ ಅಳವಡಿಸಲಾಗಿದೆ. ೫೦ಕ್ಕೂ ಹೆಚ್ಚು ಅರಣ್ಯ ಸಿಬ್ಬಂದಿ ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ. ಸುತ್ತಮುತ್ತಲಿನ ಜಮೀನುಗಳಿಗೆ ರೈತರು ತೆರಳದಂತೆ ಅರಣ್ಯಾಧಿಕಾರಿಗಳು ಸೂಚನೆ ನೀಡಿದ್ದಾರೆ.

<><><>

ಬೆಂಗಳೂರಿನಲ್ಲಿ ಕಳೆದ ರಾತ್ರಿ ಸುರಿದ ಭಾರೀ ಮಳೆಯಿಂದಾಗಿ ಹಲವು ಪ್ರದೇಶಗಳು ಜಲಾವೃತವಾಗಿವೆ. ಮುಂದಿನ ೨೪ ರಿಂದ ೪೮ ಗಂಟೆಗಳಲ್ಲಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ನಿನ್ನೆ ಸುರಿದ ಭಾರೀ ಮಳೆಯಿಂದಾಗಿ ದೊಮ್ಮಲೂರು ಪ್ರದೇಶದಲ್ಲಿ ಸೇನಾ ಆವರಣದ ಗೋಡೆಯೊಂದು ಕುಸಿದು ಬಿದ್ದು, ಮೂರು ಹಸುಗಳು ಸಾವನ್ನಪಿವೆ. ಹಸುಗಳ ಮಾಲೀಕ ಮುನಿರಾಜು ಗಂಭೀರವಾಗಿ ಗಾಯಗೊಂಡಿದ್ದಾರೆ. ನೈಋತ್ಯ ಮುಂಗಾರು ಮತ್ತು ವಾಯುಭಾರ ಕುಸಿತದಿಂದಾಗಿ ರಾಜ್ಯದ ಕರಾವಳಿ, ಮಲೆನಾಡು ಮತ್ತು ಒಳನಾಡು ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ. ಉಡುಪಿ, ದಕ್ಷಿಣ ಕನ್ನಡ, ಕಾರವಾರ ಜಿಲ್ಲೆಗಳಲ್ಲಿ ಭಾರೀ ಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆಯಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><><>

ಕೇಂದ್ರ ಸರ್ಕಾರದ ಭೂ ವಿಜ್ಞಾನ ಸಚಿವಾಲಯದ ನೇತೃತ್ವದಲ್ಲಿ ಕಡಲತೀರಗಳನ್ನು ಸ್ವಚ್ಛಗೊಳಿಸಲು ಮತ್ತು ಸಾಗರ ಸಂರಕ್ಷಣೆಯನ್ನು ಉತ್ತೇಜಿಸಲು ರಾಷ್ಟ್ರವ್ಯಾಪಿ 'ಸ್ವಚ್ಛ ಸಾಗರ, ಸುರಕ್ಷಿತ ಸಾಗರ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರ ಅಂಗವಾಗಿ ಇದೇ ೧೯ಕ್ಕೆ ಉತ್ತರಕನ್ನಡ ಜಿಲ್ಲೆಯ ಕಾರವಾರದ ಕಡಲತೀರ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅಭಿಯಾನದ ಸಂಯೋಜಕ, ಡಾ.ಜಗನ್ನಾಥ ರಾಠೋಡ್, ಕಡಲತೀರಗಳಲ್ಲಿ ಪ್ಲಾಸ್ಟಿಕ್ ಹಾಗೂ ಇತರೆ ಕಸದ ಶೇಖರಣೆಯನ್ನು ಕಡಿಮೆ ಮಾಡುವುದು ಮತ್ತು ಸಾಗರದ ಆರೋಗ್ಯವನ್ನು ಕಾಪಾಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

<><><>

ಕೆಪಿಸಿಸಿ ಕಚೇರಿಯಲ್ಲಿ ಇಂದು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಹಾಗೂ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ನೂತನವಾಗಿ ನೇಮಕವಾಗಿರುವ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರೊಂದಿಗೆ ಸಭೆ ನಡೆಸಿದರು. ಈ ಕುರಿತಂತೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೂತನವಾಗಿ ಜಿಲ್ಲಾಧ್ಯಕ್ಷರು ನೇಮಕಗೊಂಡಿದ್ದು, ಅವರಿಗೆ ಮಾರ್ಗದರ್ಶನ ನೀಡಲು ಹೈಕಮಾಂಡ್ ನಾಯಕರು ಸಭೆ ಕರೆದಿದ್ದಾರೆ ಎಂದು ತಿಳಿಸಿದ್ದಾರೆ. ನಾಳೆಯಿಂದ ಮೂರು ದಿನಗಳ ಕಾಲ ಕಲಬುರಗಿ, ಮಂಗಳೂರು, ಉಡುಪಿ, ಚಿಕ್ಕಮಗಳೂರು, ಹಾಸನ ಜಿಲ್ಲೆಗಳ ಪ್ರವಾಸ ಕೈಗೊಳ್ಳುವುದಾಗಿ ಹೇಳಿದ್ದಾರೆ. ಕಲಬುರಗಿ ಪ್ರವಾಸದ ವೇಳೆ ಬರ ಕುರಿತಂತೆ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

<><><>

ನವದೆಹಲಿಯ ಇಂಡಿಯನ್ ಸೊಸೈಟಿ ಆಫ್ ಪ್ಲಾಂಟ್ ಜೆನೆಟಿಕ್ ರಿಸೋರ್ಸ್‌ಸ್ ಹಾಗೂ ಬೆಂಗಳೂರಿನ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ ಸಹಯೋಗದೊಂದಿಗೆ ನಾಳೆಯಿಂದ ೧೯ರವರೆಗೆ ಬೆಂಗಳೂರಿನ ಹೆಸರಘಟ್ಟದಲ್ಲಿ ದ್ವೀಪಕಲ್ಪ ಭಾರತದ ಸಸ್ಯತಳಿ ಸಂಪನ್ಮೂಲಗಳ ಸದ್ಬಳಕೆ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿದೆ. ಪಶ್ಚಿಮ ಮತ್ತು ಪೂರ್ವಘಟ್ಟಗಳು ದಖ್ಖನ್‌ಪ್ರಸ್ಥಭೂಮಿ, ಕರಾವಳಿ ಪರಿಸರ ವ್ಯವಸ್ಥೆಗಳ ಕುರಿತಂತೆಯೂ ಚರ್ಚೆ ನಡೆಯಲಿದೆ. ಈ ವಿಚಾರ ಸಂಕಿರಣದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಹಗಲು ಹೊತ್ತಿನಲ್ಲೇ ೭ ಗಂಟೆಗಳ ಕಾಲ ಗುಣಮಟ್ಟದ ಮತ್ತು ಸಮರ್ಪಕ ವಿದ್ಯುತ್ ನೀಡುವ ಕೇಂದ್ರದ ಮಹತ್ವಾಕಾಂಕ್ಷೆಯ ಕುಸುಮ್ ಘಟಕ-ಸಿ ಯೋಜನೆಯಡಿ ೨೮ ಕಾಮಗಾರಿಗಳು ಅನುಮೋದನೆಗೊಂಡಿದ್ದು, ೧೧ ಕಾಮಗಾರಿಗಳು ಪೂರ್ಣಗೊಂಡು ೮೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಕುಸುಮ್ ಘಟಕ-ಸಿ ಯೋಜನೆ ಈ ಭಾಗದ ರೈತರಿಗೆ ವರದಾನವಾಗಿ ಸೌರೀಕರಣದ ಮೂಲಕ ದೊರೆಯುತ್ತಿರುವ ವಿದ್ಯುತ್, ಹಗಲು ಹೊತ್ತಿನಲ್ಲೇ ತಡೆ ಇಲ್ಲದೆ ೭ ಗಂಟೆಗಳ ಕಾಲ ಲಭ್ಯವಾಗುವ ಮೂಲಕ ರೈತರಲ್ಲಿ ಭರವಸೆ ಮೂಡಿಸಿದೆ. ಈ ಯೋಜನೆಯಡಿ ಜಿಲ್ಲೆಯ ೬೮೦ ಕ್ಕೂ ಎಕರೆ ಭೂಮಿಯಲ್ಲಿ ಸೋಲಾರ್ ಫಲಕಗಳನ್ನು ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ. ಇದರಿಂದ ಒಟ್ಟು ೨೦೮ ಮೆಗಾವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆಯ ಗುರಿ ಹೊಂದಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>